OCTOBER 22, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ರಾಜಧಾನಿ ಬೆಂಗಳೂರು ಮತ್ತು ಆಂಧ್ರ ಪ್ರದೇಶದ** ವಿಜಯವಾಡ ನಡುವಿನ, ರಸ್ತೆ ಪ್ರಯಾಣದ ಅವಧಿಯನ್ನು ಗಣನೀಯವಾಗಿ ಕಡಿಮೆಗೊಳಿಸುವ, ಬೆಂಗಳೂರು–ವಿಜಯವಾಡ ಗ್ರೀನ್ ಫೀಲ್ಡ್ ರಾಷ್ಟ್ರೀಯ ಹೆದ್ದಾರಿ ಯೋಜನೆ ಕಾಮಗಾರಿ ಭರದಿಂದ ಸಾಗಿದೆ. ಕೇಂದ್ರ ಸರ್ಕಾರದ ಭಾರತ ಮಾಲಾ ಪರಿಯೋಜನೆಯಡಿ ರೂಪಿಸಲಾಗುತ್ತಿರುವ, ಆರು ಪಥಗಳ ಎಕ್ಸ್ ಪ್ರೆಸ್ ವೇ, ಎರಡು ರಾಜ್ಯಗಳ ನಡುವಿನ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸಲಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವರದಿ ತಿಳಿಸಿದೆ. ಸುಮಾರು 19 ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ, ಈ ಯೋಜನೆಯನ್ನು, 2027 ರ ವೇಳೆಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಪ್ರಾಧಿಕಾರ ಮಾಹಿತಿ ನೀಡಿದೆ.

<><><>

**ಕೇಂದ್ರ ಹಣಕಾಸು ಸಚಿವಾಲಯ,** ದೇಶಾದ್ಯಂತ ಇಂದಿನಿಂದ, ಹಣಕಾಸು ಒಳಗೊಳ್ಳುವಿಕೆ ಅಭಿಯಾನ ಆರಂಭಿಸಿದೆ. 2 ಲಕ್ಷದ 70 ಸಾವಿರ ಗ್ರಾಮ ಪಂಚಾಯಿತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ, ಡಿಸೆಂಬರ್ 31 ರ ವರೆಗೆ ಜರುಗುವ, ಈ ಅಭಿಯಾನದಡಿ, ಪ್ರಧಾನಮಂತ್ರಿ ಜೀವನಜ್ಯೋತಿ ಬಿಮಾಯೋಜನೆ, ಸುರಕ್ಷಾ ಬಿಮಾಯೋಜನೆ ಹಾಗೂ ಅಟಲ್ ಪಿಂಚಣಿ ಯೋಜನೆಗಳಡಿ, ನೋಂದಣಿ ನಡೆಯಲಿದೆ. ಹಿಂಗಾರು ಹಂಗಾಮಿನ ಹಿನ್ನೆಲೆ, ಕಿಸಾನ್ ಕ್ರೆಡಿಟ್ ಕಾರ್ಡ್ ಹಾಗೂ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ನೋಂದಣಿಗೂ ಅಭಿಯಾನದಲ್ಲಿ ಉತ್ತೇಜನ ನೀಡಲಾಗುವುದು ಎಂದು ಸಚಿವಾಲಯ ತಿಳಿಸಿದೆ.

<><><>

**ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇಂದು** ಹೊಸದಿಲ್ಲಿಯಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ಸಚಿವ ಭೂಪೇಂದರ್ ಯಾದವ್ ಹಾಗೂ ಸಂವಹನ ಖಾತೆ ಸಚಿವ ಜ್ಯೋತಿರಾದಿತ್ಯ ಸಿಂಧ್ಯಾ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಲಿದ್ದಾರೆ.

<><><>

**ಚಿಕ್ಕಮಗಳೂರು, ಜಿಲ್ಲೆ ಬೀಕನಹಳ್ಳಿ ಗ್ರಾಮದ** ಪ್ರಸಿದ್ಧ ಶ್ರೀ ಚಾಮುಂಡೇಶ್ವರಿ ದೇವಾಲಯದಲ್ಲಿ ವಿಜಯದಶಮಿ ಅಂಗವಾಗಿ ಸಾಂಪ್ರದಾಯಿಕ ಅಂಬು ಹೊಡೆಯುವ ಕಾರ್ಯಕ್ರಮ, ದೇವಿಯ ಮೆರವಣಿಗೆ, ವಿಶೇಷ ಪೂಜಾ ಕಾರ್ಯಕ್ರಮಗಳು ನೆರವೇರಿದವು. ಇಂದು, ಶೃಂಗೇರಿ ಶಾರದಾಂಬಾ ದೇವಾಲಯದಲ್ಲಿ, ತಾಯಿ ಶ್ರೀ ಶಾರದಾಂಬೆಯ ಮಹಾ ರಥೋತ್ಸವ, ಶೃಂಗೇರಿ ಜಗದ್ಗುರುಗಳ ಅಡ್ಡ ಪಲ್ಲಕಿ ಉತ್ಸವಗಳು ನೆರವೇರಲಿವೆ.

<><><>

**ಕರ್ನಾಟಕ ಜಾನಪದ ಅಕಾದೆಮಿ ಕೊಡಮಾಡುವ,** 2026–27 ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿಗೆ, ಧಾರವಾಡದ ತತ್ವಪದ ಗಾಯಕ ಬಸಣ್ಣ ಶಿವಬಸಪ್ಪ ಮುಳಗುಂದ ಸೇರಿದಂತೆ ವಿವಿಧ ಜಿಲ್ಲೆಗಳ ಒಟ್ಟು 30 ಜನರು ಆಯ್ಕೆಯಾಗಿದ್ದಾರೆ. ಪ್ರಶಸ್ತಿ ಪ್ರದಾನ ಸಮಾರಂಭ, ನಾಡಿದ್ದು, 24 ರಂದು, ಮಂಡ್ಯದ ಡಾಕ್ಟರ ಬಿ.ಆರ್ ಅಂಬೇಡ್ಕರ ಭವನದಲ್ಲಿ ಆಯೋಜಿತವಾಗಿದೆ. ವಾರ್ಷಿಕ ಗೌರವ ಪ್ರಶಸ್ತಿಗೆ ಭಾಜನರಾದ, ತತ್ವಪದಕಾರ ಬಸಣ್ಣ ಮುಳಗುಂದ ಪ್ರದೇಶ ಸಮಾಚಾರಕ್ಕಾಗಿ, ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಬಸಣ್ಣ ಮುಳಗುಂದ ಧ್ವನಿ– 37 ಸೆಕೆಂದುಗಳು**

<><><>

**ಬೆಳಗಾವಿಯ ಕಿತ್ತೂರು ಕೋಟೆ ಪರಿಸರದಲ್ಲಿ, ನಾಳೆಯಿಂದ,** ಮೂರು ದಿನಗಳ ಕಾಲ ಕಿತ್ತೂರು ಉತ್ಸವ ಆಯೋಜಿತವಾಗಿದೆ. ಬೆಳಗ್ಗೆ ಉತ್ಸವಕ್ಕೆ ಚಾಲನೆ ದೊರೆಯಲಿದೆ. ಸಂಜೆ 7 ಗಂಟೆಗೆ ಉತ್ಸವದ ಅಧಿಕೃತ ಉದ್ಘಾಟನೆಯನ್ನು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ನೆರವೇರಿಸಲಿದ್ದಾರೆ. ಉತ್ಸವದಲ್ಲಿ ಸ್ಥಳೀಯ ಹಾಗೂ ನಾಡಿನ ಹೆಸರಾಂತ ಕಲಾವಿದರಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಕವಿಗೋಷ್ಠಿ, ಕಿತ್ತೂರು ಸಂಸ್ಥಾನದ ಇತಿಹಾಸ ಕುರಿತಾದ ವಿಚಾರ ಸಂಕಿರಣ, ಜಲ ಸಾಹಸ ಕ್ರೀಡೆ ಸೇರಿದಂತೆ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ.

<><><>

**ಉತ್ತರ ಕರ್ನಾಟಕ ಭಾಗದಲ್ಲಿ,** ಹಲವು ವರ್ಷಗಳಿಂದ ಪ್ರಗತಿಯಲ್ಲಿರುವ ರೇಲ್ವೆ ಮಾರ್ಗಗಳ ಕಾಮಗಾರಿಗಳಿಗೆ ಮತ್ತಷ್ಟು ವೇಗ ನೀಡಲು ರಾಜ್ಯ ಸರ್ಕಾರ, ಕೇಂದ್ರ ಸರ್ಕಾರದ ಮೇಲೆ ಒತ್ತಡ ತರುವಂತೆ, ಉತ್ತರ ಕರ್ನಾಟಕ ರೇಲ್ವೆ ಹೋರಾಟ ಸಮಿತಿ, ವಿಧಾನ ಪರಿಷತ್ ಉಪ ಸಭಾಪತಿ ಉಮಾಶ್ರೀ ಅವರಿಗೆ ಬಾಗಲಕೋಟೆಯಲ್ಲಿ ಮನವಿ ಸಲ್ಲಿಸಿದೆ.

<><><>

**ಕರ್ನಾಟಕ ವಿಧಾನ ಪರಿಷತ್ತಿನ, ಪಶ್ಚಿಮ ಮತ್ತು ಆಗ್ನೇಯ ಪದವಿಧರ** ಕ್ಷೇತ್ರ, ಬೆಂಗಳೂರು ಶಿಕ್ಷಕರ ದ್ವೈವಾರ್ಷಿಕ ಚುನಾವಣೆ ಮತ್ತು ಈಶಾನ್ಯ ಕರ್ನಾಟಕ ಶಿಕ್ಷಕರ ವಿಧಾನ ಪರಿಷತ್ ಕ್ಷೇತ್ರದ ಚುನಾವಣೆ ನಾಳೆ 23 ರಂದು, ಬೆಳಗ್ಗೆ 8 ರಿಂದ ಸಂಜೆ 4 ಗಂಟೆಯ ವರೆಗೆ ನಡೆಯಲಿದೆ. ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಸರ್ಕಾರ, ಒಂದು ದಿನದ ವಿಶೇಷ ಸಾಂದರ್ಭಿಕ ರಜೆ ಘೋಷಿಸಿದೆ.

<><><>

**ಬೆಂಗಳೂರು ಶಿಕ್ಷಕರ ಕ್ಷೇತ್ರ** ವಿಧಾನ ಪರಿಷತ್ ಚುನಾವಣೆ ಹಿನ್ನೆಲೆ, ನಿನ್ನೆ ಸಂಜೆ 4 ಗಂಟೆಯಿಂದ, ನಾಳೆ ಸಂಜೆ 4 ಗಂಟೆಯವರೆಗೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ, ಜಿಲ್ಲಾಧಿಕಾರಿ ಡಾಕ್ಟರ ಕೆ.ಎನ್ ಅನುರಾಧ ಆದೇಶ ಹೊರಡಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>